**All India Radio: Bangalore**
**Regional Bulletin In Kannada**
**01.03.2026 / 2.30 p.m.**

# ಆಕಾಶವಾಣಿ ಬೆಂಗಳೂರು

# ಪ್ರದೇಶ ಸಮಾಚಾರ

**01.03.2026 / 2.30 p.m.**

**<><><><>**

ಮುಖ್ಯಾಂಶಗಳು

1. ಇರಾನ್-ಇಸ್ರೇಲ್ ಸಂಘರ್ಷ ಹಿನ್ನೆಲೆ ; ಮಧ್ಯ ಪ್ರಾಚ್ಯ ರಾಷ್ಟ್ರಗಳಲ್ಲಿನ ಕನ್ನಡಿಗರ ಸುರಕ್ಷತೆ ಬಗ್ಗೆ ರಾಜ್ಯ ಸರ್ಕಾರ ಆದ್ಯತೆ
2. ಶಿವಮೊಗ್ಗದಲ್ಲಿ ಸಾವನ್ನಪ್ಪಿದ ಬಾಲಕನ ಕುಟುಂಬಕ್ಕೆ ೧೫ ಲಕ್ಷ ರೂಪಾಯಿ ಪರಿಹಾರದ ಚೆಕ್ ವಿತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
3. ಕೈಗಾ ಅಣು ವಿದ್ಯುತ್ ಉತ್ಪಾದನಾ ಘಟಕಗಳ ಕಾಂಕ್ರೀಟಿಕರಣಕ್ಕೆ ಅಣುಶಕ್ತಿ ಆಯೋಗದ ಅಧ್ಯಕ್ಷ ಡಾ.ಅಜಿತ್ ಮೊಹಂತಿ ಚಾಲನೆ
4. ಮಾದಕ ದ್ರವ್ಯ ಮುಕ್ತ ಕರ್ನಾಟಕಕ್ಕೆ ಪಣ : ರಾಜ್ಯದ ವಿವಿಧೆಡೆ ಪೊಲೀಸ್ ಇಲಾಖೆಯಿಂದ ಮ್ಯಾರಥಾನ್
5. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ವಿಫಲ - ಸಂಸದ ಬಸವರಾಜ ಬೊಮ್ಮಾಯಿ ಆರೋಪ

<><><><>

ಇಸ್ರೇಲ್ ಹಾಗೂ ಇರಾನ್ ನಡುವಿನ ಸಂಘರ್ಷದಿಂದಾಗಿ ಇರಾನ್, ಕತಾರ್ ಸೇರಿದಂತೆ ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ನೆಲೆಸಿರುವ ಕನ್ನಡಿಗರ ಸುರಕ್ಷತೆಯನ್ನು ರಾಜ್ಯ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಮಧ್ಯಪ್ರಾಚ್ಯ ದೇಶಗಳಲ್ಲಿ ವಿಮಾನ ಸಂಚಾರ ಸ್ಥಗಿತಗೊಂಡಿರುವ ಕಾರಣ ನಾಡಿಗೆ ಮರಳಲು

ಸಾಧ್ಯವಾಗದೇ ಯುದ್ಧ ಪೀಡಿತ ರಾಷ್ಟ್ರಗಳಲ್ಲಿ ಸಿಲುಕಿರುವವರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಮನವಿ ಮಾಡಿದ್ದಾರೆ. ಪ್ರತಿಯೊಬ್ಬ ಕನ್ನಡಿಗನ ಸುರಕ್ಷತೆ ಸರ್ಕಾರದ ಆದ್ಯತೆಯಾಗಿದ್ದು, ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿರುವುದಾಗಿ ತಿಳಿಸಿದ್ದಾರೆ. ಬಳ್ಳಾರಿ ಮೂಲದ ೩೨ ಮಂದಿ ದುಬೈನಲ್ಲಿ ಸಿಲುಕಿರುವ ಬಗ್ಗೆ ಮಾಜಿ ಸಚಿವ ನಾಗೇಂದ್ರ ಮಾಹಿತಿ ನೀಡಿದ್ದು, ಅವರ ಸುರಕ್ಷತೆ ಬಗ್ಗೆಯೂ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಸ್ಥಳೀಯ ಅಧಿಕಾರಿಗಳು ಮತ್ತು ಭಾರತೀಯ ರಾಯಭಾರ ಕಚೇರಿಗಳು ನೀಡುವ ಸಲಹೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅವರು ಮನವಿ ಮಾಡಿದ್ದಾರೆ.

<><><><>

ಇರಾನ್ ಹಾಗೂ ಅಮೆರಿಕ, ಇಸ್ರೇಲ್ ನಡುವೆ ಸಂಘರ್ಷ ನಡೆಯುತ್ತಿರುವ ಹಿನ್ನೆಲೆಯಲ್ಲಿ ಇರಾನ್, ದುಬೈ, ಸೇರಿದಂತೆ ಹಲವೆಡೆ ಸಿಲುಕಿರುವ ಕನ್ನಡಿಗರನ್ನು ರಕ್ಷಿಸುವುದು ಸರ್ಕಾರದ ಜವಾಬ್ದಾರಿ ಆಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಚಿಕ್ಕಮಗಳೂರಿನ ಬಾಳೆಹೊನ್ನೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಕನ್ನಡಿಗರೊಂದಿಗೆ ಸಂಪರ್ಕದಲ್ಲಿದೆ. ವಿದೇಶಾಂಗ ಇಲಾಖೆಯ ಹೆಚ್ಚಿನ ಮಾಹಿತಿ ಬಂದ ಬಳಿಕ, ಕನ್ನಡಿಗರ ನೆರವಿಗೆ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

<><><><>

ಇರಾನ್-ಇಸ್ರೇಲ್ ಸಂಘರ್ಷದಿಂದಾಗಿ ಮಧ್ಯಪ್ರಾಚ್ಯ ಮತ್ತು ಕೊಲ್ಲಿ ದೇಶಗಳಲ್ಲಿ ಜನರು ಭಯ ಭೀತರಾಗಿದ್ದಾರೆ.

ಈ ದೇಶಗಳಲ್ಲಿ ರಾಜ್ಯದ ಹಲವರು ಸಿಲುಕಿಕೊಂಡಿರುವ ಬಗ್ಗೆ ಮಾಹಿತಿ ಲಭ್ಯವಾಗಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಯಾರಾದರೂ ಸಂಕಷ್ಟ ಅನುಭವಿಸುತ್ತಿದ್ದರೆ ದೇಶಗಳ ಸಹಾಯವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

ಕತಾರ್: ೦೦೯೭೪-೫೫೬೪೭೫೦೨

ಬಹ್ರೇನ್: ೦೦೯೭೩-೩೯೪೧೮೦೭೧

ಜೋರ್ಡಾನ್: ೦೦೯೬೨-೭೭೦ ೪೨೨ ೨೭೬

ಓಮನ್: ೮೦೦೭ ೧೨೩೪ / ವಾಟ್ಸಾಪ್ ಸಂ: ೯೬೮ ೯೮೨೮ ೨೨೭೦,

ಇರಾಕ್: ೯೬೪ ೭೭೧ ೬೫೧ ೧೧೮೫ / ೯೬೪ ೭೭೦ ೪೪೪೪

ಕುವೈತ್: ೯೬೫ ೬೫೫೦೧೯೪೬

ಪ್ಯಾಲೆಸ್ಟೈನ್: ೯೭೦ ೫೯೨೯೧೬೪೧೮ ಈ ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಛೇರಿಯ ವಿಪತ್ತು ನಿರ್ವಹಣಾ ಕೇಂದ್ರ ದೂರವಾಣಿ ಸಂಖ್ಯೆ ೦೮೦-೨೮೩೮೮೦೦೫ ಇಲ್ಲಿಗೆ ಕರೆ ಮಾಡಿ ಮಾಹಿತಿ ನೀಡುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ಇಸ್ರೇಲ್-ಇರಾನ್ ಸಂಘರ್ಷದ ಹಿನ್ನೆಲೆಯಲ್ಲಿ ಮಂಗಳೂರು ವಿಮಾನ ನಿಲ್ದಾಣದಿಂದ ಗಲ್ಫ್ ರಾಷ್ಟ್ರಗಳಿಗೆ ತೆರಳುವ ವಿಮಾನಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದೆ. ಮಧ್ಯಪ್ರಾಚ್ಯದ ಕಡೆಗೆ ತೆರಳುವ ವಿಮಾನಗಳಿಗೆ ಮಂಗಳೂರಿನಿಂದ ನೇರ ಮಾರ್ಗ ಇಲ್ಲದ ಕಾರಣ ಗಲ್ಫ್ ರಾಷ್ಟ್ರಗಳಿಗೆ ತೆರಳಿ ನಂತರ ಸಂಚಾರ ಮುಂದುವರಿಸಬೇಕಿತ್ತು. ಹೀಗಾಗಿ ಮಂಗಳೂರು ವಿಮಾನ ನಿಲ್ದಾಣದಿಂದ ಗಲ್ಫ್ ರಾಷ್ಟ್ರಗಳತ್ತ ಹೊರಟ ಕೆಲವು ವಿಮಾನಗಳನ್ನು ಬೇರೆ ಏರ್‌ಪೋರ್ಟ್‌ಗಳಲ್ಲಿ ಇಳಿಸಲಾಗಿದ್ದರೆ, ಇನ್ನೂ ಕೆಲವು ವಿಮಾನಗಳು ಮಂಗಳೂರಿಗೆ ಮರಳಿವೆ. ಗಲ್ಫ್ ರಾಷ್ಟ್ರಗಳಿಂದ ಮಂಗಳೂರಿಗೆ ಆಗಮಿಸಬೇಕಿದ್ದ ಕೆಲವು ವಿಮಾನಗಳ ಸಂಚಾರವನ್ನೂ ರದ್ದು ಮಾಡಲಾಗಿದೆ. ಹಲವು

ವಿಮಾನಗಳ ಸಂಚಾರವನ್ನು ರದ್ದು ಮಾಡಲಾಗಿದೆ ಎಂದು ವಿಮಾನ ನಿಲ್ದಾಣದ ಪ್ರಕಟಣೆ ತಿಳಿಸಿದೆ.

<><><><>

ದುಬೈನಲ್ಲಿ ಅಂತಾರಾಷ್ಟ್ರೀಯ ವಿಮಾನ ಹಾರಾಟ ಸ್ಥಗಿತಗೊಳಿಸಿರುವ ಹಿನ್ನೆಲೆಯಲ್ಲಿ ಬಳ್ಳಾರಿ ನಗರ ಶಾಸಕ ಭರತ್ ರೆಡ್ಡಿ ಸೇರಿದಂತೆ ಜಿಲ್ಲೆಯಿಂದ ಪ್ರವಾಸಕ್ಕೆ ತೆರಳಿದ್ದ ೩೫ಕ್ಕೂ ಹೆಚ್ಚು ಜನರು ದುಬೈನಲ್ಲಿ ಸಿಲುಕಿದ್ದಾರೆ. ಶಾಸಕ ಭರತ್ ರೆಡ್ಡಿ ದುಬೈ ಪ್ರವಾಸಕ್ಕೆ ಕುಟುಂಬಸಮೇತ ತೆರಳಿದ್ದರು. ಈಗ ಅವರು ಸೇರಿದಂತೆ ಎಲ್ಲರೂ ದುಬೈನಲ್ಲಿ ಸುರಕ್ಷಿತವಾಗಿದ್ದಾರೆಂದು ತಿಳಿದು ಬಂದಿದೆ.

<><><><>

ಶಿವಮೊಗ್ಗದ ಉರಗಡೂರಿನಲ್ಲಿ ಸಾವನ್ನಪ್ಪಿದ ಅಪ್ರಾಪ್ತ ಬಾಲಕನ ಕುಟುಂಬಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ೧೫ ಲಕ್ಷ ರೂಪಾಯಿಗಳ ಪರಿಹಾರದ ಚೆಕ್ ವಿತರಿಸಿದರು. ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ಬಾಲಕ ಸಂಕೇತ್‌ನ ತಂದೆ ಕುಮಾರ್ ಹಾಗೂ ತಾಯಿ ಮಂಜುಳಾಗೆ ಚೆಕ್ ಹಸ್ತಾಂತರಿಸಿದರು. ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ೧೦ ಲಕ್ಷ ರೂಪಾಯಿ ಹಾಗೂ ಶಿಕ್ಷಣ ಇಲಾಖೆಯಿಂದ ೫ ಲಕ್ಷ ರೂಪಾಯಿ ಪರಿಹಾರ ನೀಡಿ ಸಾಂತ್ವಾನ ಹೇಳಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ಸರ್ಕಾರ ಅಗತ್ಯಕ್ರಮ ಕೈಗೊಂಡಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ದೇಶದ ಪ್ರಮುಖ ಅಣು ವಿದ್ಯುತ್ ಉತ್ಪಾದನಾ ಘಟಕದಲ್ಲಿ ಒಂದಾದ ಉತ್ತರ ಕನ್ನಡ ಜಿಲ್ಲೆಯ ಕೈಗಾದಲ್ಲಿ ೨೧ ಸಾವಿರ ಕೋಟಿ ವೆಚ್ಚದಲ್ಲಿ ೫ ಮತ್ತು ೬ನೇ ಅಣು ವಿದ್ಯುತ್ ಘಟಕ ನಿರ್ಮಾಣವಾಗುತ್ತಿದೆ. ಈ ಘಟಕಗಳ ನಿರ್ಮಾಣ ಕಾರ್ಯದ ಕಾಂಕ್ರೀಟೀಕರಣಕ್ಕೆ ಇಂದು ಅಣು ಶಕ್ತಿ ಆಯೋಗದ ಅಧ್ಯಕ್ಷ ಡಾ.ಅಜಿತ್ ಕುಮಾರ್

ಮೊಹಂತಿ ಚಾಲನೆ ನೀಡಿದರು. ಕಾರವಾರ ತಾಲೂಕಿನ ಕೈಗಾದಲ್ಲಿ ೨೦೦೦ದಲ್ಲಿ ಕೈಗಾ ಅಣು ವಿದ್ಯುತ್ ಉತ್ಪಾದನೆ ಕೇಂದ್ರ ಪ್ರಾರಂಭಗೊಂಡಿತ್ತು. ಪ್ರಸ್ತುತ ೨೨೦ ಮೆಗಾವ್ಯಾಟ್ ಸಾಮರ್ಥ್ಯದ ೪ ಅಣು ಘಟಕಗಳು ವಿದ್ಯುತ್ ಉತ್ಪಾದನೆ ನಡೆಸುತ್ತಿದೆ. ಈ ನಾಲ್ಕು ಘಟಕದಿಂದ ೨ ಸಾವಿರದ ೨೮೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. ವಿದ್ಯುತ್ ಉತ್ಪಾದನೆ ಬೇಡಿಕೆ ಹಿನ್ನಲೆಯಲ್ಲಿ ತಲಾ ೭೦೦ ಮ್ಯಾಗಾವ್ಯಾಟ್ ನ ಗುರಿಯೊಂದಿಗೆ ೨೦೨೫ರಲ್ಲಿ ೫ ಮತ್ತು ೬ನೇ ಘಟಕ ಕಾಮಗಾರಿಗೆ ಚಾಲನೆ ನೀಡಲಾಗಿತ್ತು. ಈ ಘಟಕಗಳು ೨೦೩೦ರ ವೇಳೆಗೆ ನಿರ್ಮಾಣ ಕಾಮಗಾರಿ ಮುಗಿಸುವ ಗುರಿ ಹೊಂದಲಾಗಿದೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ನೆಲಮಂಗಲ, ಹೊಸಕೋಟೆಯಲ್ಲಿ ಇಂದು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಡ್ರಗ್ಸ್ ಮುಕ್ತ ಕರ್ನಾಟಕ ಘೋಷ ವಾಕ್ಯದೊಂದಿಗೆ, ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಲು ಮ್ಯಾರಥಾನ್ ಹಮ್ಮಿಕೊಳ್ಳಲಾಗಿತ್ತು. ದೊಡ್ಡಬಳ್ಳಾಪುರದಲ್ಲಿ ಮ್ಯಾರಥಾನ್‌ಗೆ ಚಾಲನೆ ನೀಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ಚಂದ್ರಕಾಂತ್, ಮಾದಕ ವಸ್ತುಗಳಿಂದ ಆರೋಗ್ಯಕ್ಕೆ ಹಾನಿಯಾಗುವುದಲ್ಲದೇ ದೇಶದ ಭದ್ರತೆ ಹಾಗೂ ಅಭಿವೃದ್ಧಿಗೂ ಮಾರಕವಾಗಲಿದೆ. ಯುವಕರು ದುಶ್ಚಟಗಳಿಂದ ದೂರ ಇರುವಂತೆ ಕರೆ ನೀಡಿದ್ದಾರೆ. ಚಾಮರಾಜನಗರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಕರ್ನಾಟಕ ಪೊಲೀಸ್ ರನ್ ಅಭಿಯಾನದಡಿ ಸೈಬರ್ ಅಪರಾಧಗಳ ಕುರಿತು ಅರಿವು ಮೂಡಿಸುವ ಸಂಬಂಧ ಮ್ಯಾರಾಥಾನ್ ಓಟ ನಡೆಯಿತು. ಜಿಲ್ಲಾ ಪೊಲೀಸ್ ಕವಾಯತು ಮೈದಾನದಿಂದ ಆರಂಭಗೊಂಡ ಓಟವು ಜೋಡಿರಸ್ತೆ, ಭುವನೇಶ್ವರಿ ವೃತ್ತ, ಡಿವಿಯೇಷನ್ ರಸ್ತೆ, ಸಂತೇಮರಹಳ್ಳಿ ವೃತ್ತ, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಿಂದ

ಮಾರ್ಗದಲ್ಲಿ ಸಾಗಿ ಪೊಲೀಸ್ ಕವಾಯತು ಮೈದಾನದಲ್ಲಿ ಕೊನೆಗೊಂಡಿತು. ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮಿಷನರೇಟ್ ಮತ್ತು ಧಾರವಾಡ ಜಿಲ್ಲಾ ಪೊಲೀಸ್ ಸಹಯೋಗದಲ್ಲಿ "ನಮ್ಮ ಪೊಲೀಸ್ ನಮ್ಮ ಹೆಮ್ಮೆ ಎಂಬ ಶೀರ್ಷಿಕೆಯಡಿಯಲ್ಲಿ ಫಿಟ್ನೆಸ್ ಫಾರ್ ಆಲ್", "ಡ್ರಗ್ ಮುಕ್ತ ಕರ್ನಾಟಕ" ಮತ್ತು "ಸೈಬರ್ ಕ್ರೈಂ ಜಾಗೃತಿ" ವಿಷಯಗಳ ಧ್ಯೇಯವಾಕ್ಯೊಂದಿಗೆ ಪೊಲೀಸರು ಮ್ಯಾರಥಾನ್ ಮೂಲಕ ಜಾಗೃತಿ ಮೂಡಿಸಿದರು. ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ಮಾತನಾಡಿ, ಯುವಸಮುದಾಯ ಮಾದಕ ವಸ್ತುಗಳಂತ ಜಾಲಕ್ಕೆ ಸಿಲುಕಿ ತಮ್ಮ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಧ್ವನಿ : ಎನ್. ಶಶಿಕುಮಾರ್

<><><><>

ರಾಜ್ಯ ಆಯ-ವ್ಯಯದ ಬಳಿಕ ಸರ್ಕಾರದೊಳಗಿನ ಆಂತರಿಕ ಬಿಕ್ಕಟ್ಟು ತೀವ್ರಗೊಳ್ಳಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಜನತೆ ಸರ್ಕಾರದ ಮೇಲಿನ ನಂಬಿಕೆಯನ್ನು ಸಂಪೂರ್ಣವಾಗಿ ಕಳೆದುಕೊಂಡಿದ್ದಾರೆ. ಕಾಂಗ್ರೆಸ್ ಶಾಸಕರನ್ನು ಅನಿಶ್ಚಿತತೆ ವಾತಾವರಣ ಇದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ದೂರಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಇಂದು ಜಗದ್ಗುರು ರೇಣುಕಾ ಚಾರ್ಯರ ಜಯಂತಿ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಗರ ಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ವಿ.ಎಸ್.ರವಿಕುಮಾರ್ ಮಾತನಾಡಿ, ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮದ ಮಹಾನ್ ಶರಣ ಮತ್ತು

ಗುರುಗಳಲ್ಲಿ ಒಬ್ಬರಾಗಿದ್ದು. ಇವರ ತತ್ವ, ಬದುಕಿನ ಚರಿತ್ರೆ, ಮತ್ತು ಧಾರ್ಮಿಕ ಸಾಧನೆಗಳು ಮಹತ್ವಪೂರ್ಣ ಸ್ಥಾನವನ್ನು ಪಡೆದಿವೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>